ಓ.ಎಸ್.149/2025,  ಪಿ.ಡಬ್ಲ್ಯೂ.1  ಹೆಸರುಃ ಜಗದೀಶ್ ಚಂದ್

**ದಿಃ14-07-2026 ರಂದು ಸಾಕ್ಷಿದಾರರು ಹಾಜರಿದ್ದು, ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ವಾದಿಯ ಪರ ಶ್ರೀ ಜಿ.ಇ.ಆರ್ ವಕೀಲರಿಂದಃ**

ನಾನು ನನ್ನ ಪ್ರಮಾಣ ಪತ್ರಿಕೆಯನ್ನು ಸಲ್ಲಿಸಿರುತ್ತೇನೆ. ಇದರಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ. ಪ್ರಮಾಣ ಪತ್ರದಲ್ಲಿ ಇರುವ ಸಹಿಗಳು ನನ್ನದೇ ಆಗಿರುತ್ತದೆ.

ಪ್ರತಿವಾದಿಯು ನಮ್ಮ ಬ್ಯಾಂಕಿಗೆ ಸಾಲವನ್ನು ಪಡೆಯುವ ಸಲುವಾಗಿ ನೀಡಿದಂತಹ ದಿನಾಂಕಃ19.05.2017 ರ ಸಾಲದ ಅರ್ಜಿಯನ್ನು ಹಾಜರುಪಡಿಸಿದ್ದು ನಿಪಿ-1 ಎಂದು ಗುರುತಿಸಲಾಯಿತು.

ಪ್ರತಿವಾದಿಯು ಸಾಲ ಪಡೆಯುವ ಕಾಲಕ್ಕೆ ನಮ್ಮ ಬ್ಯಾಂಕಿಗೆ ಜಾರಿ ಮಾಡಿಕೊಟ್ಟಂತಹ ಸಾಲದ ಕರಾರು ಪತ್ರ ಮತ್ತು ಕಿಸಾನ್ ಕ್ರೆಡಿಟ್ ಕಾರ್ಡ್ ಸೌಲಭ್ಯವನ್ನು ನೀಡುವಂತೆ ನೀಡಿದ ಅರ್ಜಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು.

ಪ್ರತಿವಾದಿಯು ನಮ್ಮ ಬ್ಯಾಂಕಿನಿಂದ ಸಾಲವನ್ನು ಮರುಪಾವತಿಸುವ ಕುರಿತು ಜಾರಿಮಾಡಿಕೊಟ್ಟಂತಹ ಸಾಲದ ನವೀಕರಣದ ಕುರಿತಾದ 3 ದಾಖಲಾತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-4 ರಿಂದ ನಿಪಿ-6 ಎಂದು ಗುರುತಿಸಲಾಯಿತು.

ನಮ್ಮ ಬ್ಯಾಂಕಿನವರು ಪ್ರತಿವಾದಿಗೆ ದಿ.19.07.2024 ರಂದು ನೀಡಿದ ಕಾನೂನು ತಿಳುವಳಿಕೆ ನೋಟೀಸು ಮತ್ತು ಅಂಚೆ ಸ್ವೀಕೃತಿ ಹಿಂಬರಹವನ್ನು ಹಾಜರುಪಡಿಸಿದ್ದು ನಿಪಿ.7 ಮತ್ತು 7(ಎ) ಎಂದು ಗುರುತಿಸಲಾಯಿತು.

ನಮ್ಮ ಬ್ಯಾಂಕಿನವರು ಪ್ರತಿವಾದಿಗೆ ನಮ್ಮ ವಕೀಲರ ಮೂಲಕ ನೀಡಿರುವಂತಹ ಕಾನೂನು ತಿಳುವಳಿಕೆ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ-8 ಎಂದು ಗುರುತಿಸಲಾಯಿತು.

ಪ್ರತಿವಾದಿಗೆ ಸಂಬಂಧಿಸಿದ ಸಾಲದ ಎಕ್ಸ್‌ಟ್ರಾಕ್ಟ್‌ನ್ನು ಹಾಜರುಪಡಿಸಿದ್ದು ನಿಪಿ-9 ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗಾಗಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ